# ಕರ್ನಾಟಕ ವಿಧಾನ ಪರಿಷತ್ತು.

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 924 |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 27.12.2022 |
| ಉತ್ತರಿಸಬೇಕಾದ ಸಚಿವರು | : | ನಗರಾಭಿವೃದ್ಧಿ ಸಚಿವರು. |

********

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಕೆಲವು ಅವ್ಯವಹಾರಗಳು/ನಿಯಮಬಾಹಿರ ಆದೇಶಗಳಾಗಿರುವ ಬಗ್ಗೆ, ಪ್ರಾಧಿಕಾರಕ್ಕೆ ಕೋಟ್ಯಾಂತರ ರೂಪಾಯಿಗಳ ನಷ್ಟ ಉಂಟಾಗಿದೆ ಎಂಬ ಆರೋಪಗಳು ಕೇಳಿ ಬಂದಿರುವ ಹಿನ್ನಲೆಯಲ್ಲಿ ಸರ್ಕಾರ ತನಿಖೆಗೆ ಆದೇಶಿಸಿದೆಯೇ; (ಪೂರ್ಣ ವಿವರಗಳೊಡನೆ ಮಾಹಿತಿ ನೀಡುವುದು) | ಹೌದು<br>ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿನ ಹಲವು ವಿಷಯಗಳ ಬಗ್ಗೆ ಸರ್ಕಾರದಲ್ಲಿ ಸ್ವೀಕೃತವಾಗಿರುವ ದೂರು/ ಆರೋಪಗಳ ತನಿಖೆಯನ್ನು ನಡೆಸಿ ವರದಿಯನ್ನು ನೀಡಲು ಸರ್ಕಾರದ ಆದೇಶ ಸಂಖ್ಯೆ: ನಅಇ 308 ಮೈಅಪ್ರಾ 2022 ದಿನಾಂಕ: 02.07.2022 ಹಾಗೂ ತಿದ್ದುಪಡಿ ಆದೇಶ ದಿನಾಂಕ: 11.08.2022 ಮತ್ತು 25.08.2022 ರನ್ವಯ ತಾಂತ್ರಿಕ ಸಮಿತಿಯನ್ನು ರಚಿಸಲಾಗಿದೆ. |
| (ಆ) | ತನಿಖಾಧಿಕಾರಿಯಾಗಿ ಯಾರನ್ನು ನೇಮಕ ಮಾಡಲಾಗಿದೆ; | 1. ಶ್ರೀ ಮುರಳಿ ಟಿ.ವಿ., ನಗರ ಮತ್ತು ಗ್ರಾಮಾಂತರ ಯೋಜನಾ ಹೆಚ್ಚುವರಿ ನಿರ್ದೇಶಕರು, ಕರ್ನಾಟಕ ರಾಜ್ಯ ನಗರ ಯೋಜನಾ ಮಂಡಳಿ, ಬೆಂಗಳೂರು. — **ಅಧ್ಯಕ್ಷರು**<br>2. ಶ್ರೀಮತಿ ಶಾಂತಲಾ, ಜಂಟಿ ನಿರ್ದೇಶಕರು, ಕೇಂದ್ರ ಕಛೇರಿ, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು. — **ಸದಸ್ಯರು**<br>3. ಶ್ರೀ ನರಸು ಕಳಂತ್ರೆ, ಕಾರ್ಯಪಾಲಕ ಅಭಿಯಂತರರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಮೈಸೂರು. — **ಸದಸ್ಯರು**<br>4. ಶ್ರೀ ಕಲ್ಲಿನಾಥ, ಉಪ ನಿರ್ದೇಶಕರು, ಕೇಂದ್ರ ಕಛೇರಿ, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು. — **ಸದಸ್ಯರು** |
| (ಇ) | ಯಾವ್ಯಾವ ಪ್ರಕರಣಗಳನ್ನು ತನಿಖೆಗೆ ಒಪ್ಪಿಸಲಾಗಿದೆ; | ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಅನುದಾನ ದುರ್ಬಳಕೆ, ಬದಲಿ ನಿವೇಶನಗಳ ಹಂಚಿಕೆ, ಭೂಸ್ವಾಧೀನ ಪರಿಹಾರ, ಪ್ರಾಧಿಕಾರದ ಸಭೆಯಲ್ಲಿ ಕಾಯ್ದೆ/ನಿಯಮ/ ವಲಯನಿಯಮಗಳಿಗೆ ವಿರುದ್ಧವಾಗಿ ವಿಷಯಗಳನ್ನು ಮಂಡಿಸಿ ನಿರ್ಣಯ ಕೈಗೊಂಡಿರುವುದು, ಕಡತಗಳಲ್ಲಿನ ಅವ್ಯವಹಾರ ನಡೆಸಿರುವ ಬಗ್ಗೆ ಮೇಲಿಂದ ಮೇಲೆ ಸಾರ್ವಜನಿಕರಿಂದ ಮತ್ತು ಸಂಘ ಸಂಸ್ಥೆಗಳಿಂದ ಹಲವು |

| | | |
|---|---|---|
| | | ದೂರುಗಳು/ಆರೋಪಗಳು ಹಾಗೂ ಪ್ರಾಧಿಕಾರದ ಅಧ್ಯಕ್ಷರ ವಿರುದ್ಧ ಆಯುಕ್ತರು ಮತ್ತು ಆಯುಕ್ತರ ವಿರುದ್ಧ ಪ್ರಾಧಿಕಾರದ ಅಧ್ಯಕ್ಷರು ಪರಸ್ಪರ ಆರೋಪಿಸಿ ಸಲ್ಲಿಸಿರುವ ದೂರುಗಳನ್ನು ಆಮೂಲಾಗ್ರವಾಗಿ ಪರಿಶೀಲಿಸಿ, ಕೈಗೊಳ್ಳಬೇಕಾದ ಕ್ರಮದ ಬಗ್ಗೆ ಸ್ಪಷ್ಟ ಅಭಿಪ್ರಾಯದೊಂದಿಗೆ ಅಂಶವಾರು ಸಮಗ್ರ ವರದಿಯನ್ನು ಸಲ್ಲಿಸಲು ತಾಂತ್ರಿಕ ಸಮಿತಿಗೆ ಸೂಚಿಸಲಾಗಿದೆ. |
| (ಈ) | ತನಿಖೆ ಯಾವ ಹಂತದಲ್ಲಿದೆ; | ಪ್ರಸ್ತುತವಾಗಿ ಸಮಿತಿಯ ಪರಿಶೀಲನಾ ಹಂತದಲ್ಲಿರುತ್ತದೆ. |
| (ಇ) | ತನಿಖಾ ವರದಿ ಬಂದಿದ್ದರೆ, ತನಿಖಾ ವರದಿಯಲ್ಲಿನ ಮುಖ್ಯಾಂಶಗಳೇನು? (ವಿವರ ನೀಡುವುದು) | ತಾಂತ್ರಿಕ ಸಮಿತಿಯ ವರದಿಯನ್ನು ನಿರೀಕ್ಷಿಸಲಾಗಿದೆ. |

ಸಂಖ್ಯೆ: ನಅಇ 409ಮೈಅಪ್ರಾ 2022 (ಇ)

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು